**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ 3243/2014** **CW**-8 **PW**-6

**ಸಾಕ್ಷಿಯನ್ನು ದಿಃ 12.02.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ರಾಜು ಎಂ ಎಸ್ |
| ತಂದೆಯ ಹೆಸರುಃ | ಶಿವಬಸವೇಗೌಡ |
| ವಯಸ್ಸುಃ | 42 ವರ್ಷ |
| ವೃತ್ತಿಃ | ಪಿ ಐ ಸುಬ್ರಮಣ್ಯಪುರ ಪೋಲೀಸ್ ಠಾಣೆ ಬೆಂಗಳೂರು |
| ವಾಸ ಸ್ಥಳಃ | ಬೆಂಗಳೂರು |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನಾನು ಆಗಸ್ಟ್ 2012 ರಿಂದ ಜೂನ್ 2014 ರವರೆಗೆ ನಾನು ಚನ್ನರಾಯಪಟ್ಟಣ ನಗರ ಠಾಣೆಯುಲ್ಲಿ ಪಿ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 13.12.2013 ರಂದು ಚಾಸಾ-7 ರವರಿಂದ ಮುಂದಿನ ತನಿಖೆಗಾಗಿ ಕಡತವನ್ನು ಪಡೆದು ಪರಿಶೀಲಿಸಿರುತ್ತೇನೆ.

ದಿಃ 14.12.2013 ರಂದು ಬೆಳಗ್ಗೆ 10.00 ರಿಂದ 10.45 ರ ಸಮಯದಲ್ಲಿ ಕೃತ ನಡೆದ ಸ್ಥಳಕ್ಕೆ ಭೇಟಿ ನೀಡಿ ಚಾಸಾ-1 ರವರು ಸ್ಥಳ ತೋರಿಸಿದ್ದು, ಚಾಸಾ-2 ಮತ್ತು ಚಾಸಾ-3 ರವರ ಸಮಕ್ಷಮ ಸ್ಥಳ ಮಹಜರ್ ಕ್ರಮ ಜರುಗಿಸಿರುತ್ತೇನೆ.

ಸಾಕ್ಷಿ ಸ್ಥಳ ಮಹಜರ್ ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಡಿ) ಎಂದು ಗುರುತಿಸಲಾಯಿತು.

ದಿಃ 21.01.2014 ರಂದು ಮಾನ್ಯ ನ್ಯಾಯಾಲಯಕ್ಕೆ ಅಶೋಕ್ ರವರನ್ನು 2ನೇ ಆರೋಪಿಯನ್ನಾಗಿ ಪರಿಗಣಿಸಿ ತನಿಖೆ ಮುಂದುವರೆಸಲು ಕೋರಿ ನಿವೇದಿಸಿಕೊಂಡಿರುತ್ತೇನೆ.

ದಿಃ 01.03.2014 ರಂದು ಪ್ರಕರಣದ ಆರೋಪಿತರು ಠಾಣೆಗೆ ಹಾಜರಾಗಿ ಜಾಮೀನು ಅರ್ಜಿಯನ್ನು ಹಾಜರುಪಡಿಸಿರುತ್ತಾರೆ.

ದಿಃ 04.03.2014 ರಂದು 1ನೇ ಆರೋಪಿಯಿಂದ ಸ್ವಇಚ್ಛಾ ಹೇಳಿಕೆ ಪಡೆದಿರುತ್ತೇನೆ. ಅದೇ ದಿನ ಈಚರ್ ವಾಹನ ಸಂಖ್ಯೆ ಕೆಎಲ್ 05 ಕ್ಯೂ 9489 ನ್ನು 1ನೇ ಆರೋಪಿ ಠಾಣೆಗೆ ತಂದಿದ್ದು ಪಂಚರಾದ ಚಾಸಾ-4 ಮತ್ತು ಚಾಸಾ-5 ರವರ ಸಮಕ್ಷಮ ಸಂಜೆ 4.30 ರಿಂದ 5.00 ಗಂಟೆ ಸಮಯದಲ್ಲಿ ಅಮಾನತ್ತು ಮಹಜರ್ ಜರುಗಿಸಿ ಅಮಾನತ್ತುಪಡಿಸಿಕೊಂಡಿರುತ್ತೇನೆ.

ಸಾಕ್ಷಿ ಅಮಾನತ್ತು ಮಹಜರ್ ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

ಅದೇ ದಿನ ಚಾಸಾ-1 ರವರ ಮರು ಹೇಳಿಕೆ, ಚಾಸಾ-4 ಮತ್ತು ಚಾಸಾ-5 ರವರ ಹೇಳಿಕೆ ಪಡೆದಿರುತ್ತೇನೆ. ವಿಚಾರಣೆ ಕಾಲದಲ್ಲಿ ಚಾಸಾ-1 ರವರು ಮೂಲ ದಾಖಲೆಗಳನ್ನು ಹಾಜರುಪಡಿಸಿದ್ದು, ಸದರಿ ದಾಖಲೆಗಳನ್ನು ವಿಚಾರಣೆ ಸಮಯದಲ್ಲಿ ಹಾಜರುಪಡಿಸುತ್ತೇನೆ ಎಂದು ತಿಳಿಸಿ ತೆಗೆದುಕೊಂಡು ಹೋಗಿರುತ್ತಾರೆ.

ದಿಃ 24.04.2014 ರಂದು ಚಾಸಾ-1 ರವರಿಂದ ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳ ದೃಢೀಕೃತ ಪ್ರತಿಗಳನ್ನು ಪಡೆದಿರುತ್ತೇನೆ.

ಅದೇ ದಿನ ಚಾಸಾ-6 ರವರಿಂದ ವಾಲ್ಯುವೇಶನ್ ರಿಪೋರ್ಟ್ ಪಡೆದಿರುತ್ತೇನೆ.

ಸಾಕ್ಷಿ ಸದರಿ ವಾಲ್ಯುವೇಶನ್ ರಿಪೋರ್ಟ್ ನೋಡಿ ಗುರುತಿಸಿದ್ದು, ಅದನ್ನು ನಿಪಿ-6 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

ಸಾಕ್ಷಿ ನಿಪಿ-4 ರ ವಾಹನದ ಫೋಟೊಗಳನ್ನು ನೋಡಿ ಗುರುತಿಸಿರುತ್ತಾರೆ.

ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ. (ಆರೋಪಿ ಗೈರು ಹಾಜರಿದ್ದು ಆರೋಪಿ ಪರ ವಕೀಲರು ಆರೋಪಿಯನ್ನು ಗುರುತಿಸುವ ಬಗ್ಗೆ ತಕರಾರು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ).

ಅದೇ ದಿನ ತನಿಖೆಯನ್ನು ಪೂರ್ಣಗೊಳಿಸಿ ಆರೋಪಿಯರು ವಿರುದ್ಧ ದೋಷಾರೋಪಣ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

ದಿಃ 03.05.2014 ರಂದು ಸದರಿ ವಾಹನವನ್ನು ಚಾಸಾ–1 ರವರಿಗೆ ಬಿಡುಗಡೆ ಮಾಡಿರುತ್ತೇನೆ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಎಮ್ ಎನ್ ಬಿ ರವರಿಂದ ಃ**

ನಾನು ನಿಪಿ–1 ರಂತೆ ಸ್ಥಳ ಮಹಜರ್ ಕ್ರಮ ಜರುಗಿಸಿಲ್ಲ ಎಂದರೆ ಸರಿಯಲ್ಲ. ನಾನು ನಿಪಿ–2 ರಂತೆ ಅಮಾನತ್ತು ಮಹಜರ್ ಕ್ರಮ ಜರುಗಿಸಿಲ್ಲ ಮತ್ತು ಯಾವುದೇ ವಾಹನವನ್ನು ಅಮಾನತ್ತುಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ನಾನು ಚಾಸಾ–1 ರವರಿಂದ ದಾಖಲೆಯ ದೃಢಿಕೃತ ನಕಲನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ಚಾಸಾ–1 ರವರು ಮೂಲ ದಾಖಲೆಯನ್ನು ವಿಚಾರಣೆ ಕಾಲಕ್ಕೆ ಹಾಜರುಪಡಿಸುತ್ತೇನೆ ಎಂದು ನನಗೆ ತಿಳಿಸಿಲ್ಲ ಎಂದರೆ ಸರಿಯಲ್ಲ. 1ನೇ ಆರೋಪಿ ಸ್ವ–ಇಚ್ಛಾ ಹೇಳಿಕೆಯನ್ನು ಸೃಷ್ಟಿಸಿದ್ದೇನೆ ಎಂದರ ಸರಿಯಲ್ಲ. ಆರೋಪಿತರ ವಿರುದ್ಧ ಯಾವುದೇ ಆರೋಪ ಸಾಭೀತಾಗಿಲ್ಲದಿದ್ದರೂ ಆರೋಪಿಗಳ ವಿರುದ್ಧ ಸುಳ್ಳು ದೋಷಾರೋಪಣ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ.)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.**